**JUNE 30, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

ಮುಖ್ಯಾಂಶಗಳು

- ದೆಹಲಿಯಲ್ಲಿ ನಿನ್ನೆ ಪ್ರಧಾನ ಮಂತ್ರಿ ಅವರನ್ನು ಭೇಟಿಯಾಧ ಮುಖ್ಯಮಂತ್ರಿ ಸಿದ್ದರಾಮಯ್ಯ–ರಾಜ್ಯದ ಹಲವು ಅಭಿವೃದ್ಧಿ ಕಾರ್ಯಗಳ ಅನುಮೋದನೆಗೆ ಮನವಿ.

- ವಾಲ್ಮೀಕಿ ನಿಗಮ ಹಗರಣ: ಹೊಣೆ ಹೊತ್ತು ಮುಖ್ಯಮಂತ್ರಿ ರಾಜೀನಾಮೆ ನೀಡಬೇಕು– ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಒತ್ತಾಯ.

- ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ ಇಂದು ಬೆಳಗ್ಗೆ 11 ಕ್ಕೆ ಮನದ ಮಾತು ಹಂಚಿಕೊಳ್ಳಲಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ.

- ಐಸಿಸಿ ಟಿ–20 ವಿಶ್ವಕಪ್ ಕ್ರಿಕೆಟ್: ಫೈನಲ್ ಪಂದ್ಯದಲ್ಲಿ, ಭಾರತಕ್ಕೆ ರೋಚಕ ಗೆಲುವು–ಗಣ್ಯರಿಂದ ಅಭಿನಂದನೆ.

ಈಗ ವಾರ್ತೆಗಳ ವಿವರ

*******

ದೆಹಲಿಯಲ್ಲಿ ನಿನ್ನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ರಾಜ್ಯದ ಪ್ರಮುಖ ಯೋಜನೆಗಳ ಅನುಮೋದನೆ ಕುರಿತು ಮನವಿ ಸಲ್ಲಿಸಿದರು.

ಬೆಂಗಳೂರು ನಗರಕ್ಕೆ ಕುಡಿಯುವ ನೀರು ಒದಗಿಸುವ ಹಾಗೂ 400 ಮೆ.ವ್ಯಾ ವಿದ್ಯುತ್ ಉತ್ಪಾದನೆ ಮಾಡುವ ಮೇಕೆದಾಟು ಅಣೆಕಟ್ಟು ಯೋಜನೆಯ 9,000 ಕೋಟಿ ರೂಪಾಯಿಗಳ ಡಿ.ಪಿ.ಆರ್ ಗೆ ಕೇಂದ್ರ ಜಲ ಆಯೋಗದಿಂದ ಅನುಮೋದನೆ ಬಾಕಿ ಇದ್ದು, ಸದರಿ ಯೋಜನೆಯ ಬಗ್ಗೆ ಪ್ರಧಾನಿಗಳು ಖುದ್ದಾಗಿ ಆಸಕ್ತಿ ವಹಿಸುವಂತೆ ಕೋರಿದರು.

ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಘೋಷಿಸಿದಂತೆ ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂಪಾಯಿಗಳ ಬಿಡುಗಡೆ ಹಾಗೂ ಕಳಸಾ ಬಂಡೂರಿ ಕುಡಿಯುವ ನೀರಿನ ಯೋಜನೆಗೆ ಶೀಘ್ರವಾಗಿ ಅನುಮೋದನೆ ನೀಡುವಂತೆ ಜಲಶಕ್ತಿ

ಸಚಿವಾಲಯ ಮತ್ತು ಪರಿಸರ ಹಾಗೂ ಅರಣ್ಯ ಮಂತ್ರಾಲಯದ ಅಧಿಕಾರಿಗಳಿಗೆ ಸೂಚಿಸುವಂತೆ ಮುಖ್ಯಮಂತ್ರಿ ಮನವಿ ಮಾಡಿದರು.

ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಜಿಲ್ಲೆಯಲ್ಲಿ ಏಮ್ಸ್ ಸ್ಥಾಪನೆ, ಈ ಭಾಗದ ಏಳು ಜಿಲ್ಲೆಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ 3,000 ಕೋಟಿ ಅನುದಾನವನ್ನು ಬಜೆಟ್‌ನಲ್ಲಿ ಮೀಸಲಿರಿಸಿದ್ದು, ಕೇಂದ್ರ ಸರ್ಕಾರ ಅನುರೂಪದ ಅನುದಾನವನ್ನು ಒದಗಿಸುವುದು ಸೇರಿದಂತೆ ರಾಜ್ಯದ ಹಲವು ಅಭಿವೃದ್ಧಿ ಕಾರ್ಯಗಳ ಕುರಿತು ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಮುಖ್ಯಮಂತ್ರಿ ಪ್ರಧಾನಿ ಅವರನ್ನು ಕೋರಿದರು.

*******

ಕಾಟನ್ ಕ್ಯಾಂಡಿ, ಗೋಬಿ ಹಾಗು ಕಬಾಬ್ ತಯಾರಿಕೆಯಲ್ಲಿ ಕೃತಕ ಬಣ್ಣಗಳ ಬಳಕೆಯನ್ನು ನಿ ೀಧಿಸಿರುವಂತೆಯೇ ರಾಜ್ಯದಲ್ಲಿ ಮಾರಾಟವಾಗುತ್ತಿರುವ ಪಾನಿಪುರಿ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ್ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಮಾಹಿತಿ ನೀಡಿರುವ ಅವರು, ಪಾನಿಪುರಿಯ ಹಲವು ಮಾದರಿಗಳೂ ಸಹ ಆಹಾರ ಸುರಕ್ಷತೆಯ ಪರೀಕ್ಷೆಯಲ್ಲಿ ವಿಫಲವಾಗಿದ್ದು, ಇವುಗಳಲ್ಲಿ ಕ್ಯಾನ್ಸರ್‌ಕಾರಕ ಅಂಶಗಳಿರುವುದು ಪತ್ತೆಯಾಗಿದೆ. ಈ ಕುರಿತು ಹೆಚ್ಚಿನ ವಿಶ್ಲೇ ಣೆ ನಡೆಸಲಾಗುತ್ತಿದ್ದು, ಪರೀಕ್ಷಾ ವರದಿ ಬಂದ ಬಳಿಕ ಆರೋಗ್ಯ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದ್ದಾರೆ.

*******

ನಾಡಪ್ರಭು ಕೆಂಪೇಗೌಡರ ಮೂಲ ಸ್ಥಳವಾದ ದೇವನಹಳ್ಳಿ ತಾಲ್ಲೂಕಿನ ಆವತಿ ಗ್ರಾಮದ ಬಳಿ ಸ್ಮಾರಕ, ಸಂಗ್ರಹಾಲಯ ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಹೇಳಿದ್ದಾರೆ.

ಜಿಲ್ಲಾ ಮಟ್ಟದ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇದಕ್ಕಾಗಿ 10 ಎಕರೆ ಜಮೀನು ಮಂಜೂರು ಆಗಿದ್ದು, ಶೀಘ್ರ ಕಾಮಗಾರಿ ಪ್ರಾರಂಭಿಸಲಾಗುವುದು. ಕೆಂಪೇಗೌಡರ ಜೀವನ ಚರಿತ್ರೆ, ತ್ಯಾಗ, ಹೋರಾಟ, ಸಮಾಜ ಸೇವೆಗಳ ಸಮಗ್ರ ಇತಿಹಾಸ ಅಲ್ಲಿ ಅನಾವರಣಗೊಳಿಸಲಾಗುವುದು ಎಂದರು.

ಕೆಂಪೇಗೌಡರ ಅಭಿವೃದ್ಧಿಯ ದೂರದೃಷ್ಟಿಯಂತೆ ನಮ್ಮ ಗ್ರಾಮಾಂತರ ಜಿಲ್ಲೆಯಲ್ಲಿಯೂ ಕೂಡ ಕೆರೆಗಳು, ಶಾಲೆಗಳು, ರಸ್ತೆಗಳು, ದೇವಸ್ಥಾನಗಳ ಅಭಿವೃದ್ಧಿ ಮಾಡಲಾಗುವುದು ಎಂದು ಸಚಿವರು ಹೇಳಿದರು.

*******

ಭದ್ರಾ ಮೇಲ್ದಂಡೆ ಯೋಜನೆಗೆ 5 ಸಾವಿರದ 300 ಕೋಟಿ ರೂಪಾಯಿ ಅನುದಾನ ನೀಡಲು ಕೇಂದ್ರ ಸರ್ಕಾರ ಸಮ್ಮತಿಸಿದೆ ಎಂದು ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ತಿಳಿಸಿದ್ದಾರೆ.

ಚಿತ್ರದುರ್ಗದಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಈ ಕುರಿತು ಸಮ್ಮತಿಸಿದ್ದು, ರಾಜ್ಯಸರ್ಕಾರ ಅಗತ್ಯ ತಾಂತ್ರಿಕ ಮಾಹಿತಿ ಒದಗಿಸುವಂತೆ ಸೂಚಿಸಿದ್ದಾರೆ ಎಂದರು.

ತಾಂತ್ರಿಕ ಮಾಹಿತಿ ತಲುಪಿದ ನಂತರ ಮುಂದಿನ ಕ್ರಮ ಕೈಗೊಳ್ಳುವುದಾಗಿ ಕೇಂದ್ರ ಸಚಿವರು ತಿಳಿಸಿದ್ದಾರೆ. ಚಿತ್ರದುರ್ಗ ಜಿಲ್ಲೆಗೆ ಕೇಂದ್ರೀಯ ವಿದ್ಯಾಲಯ ವಸತಿ ಶಾಲೆಯ  ಅವಶ್ಯಕತೆ ಇದ್ದು, ಆದ ್ಟ ಬೇಗ ಮುಂಜೂರು ಮಾಡುವಂತೆ ಕೋರಲಾಗಿದೆ ಎಂದು ಸಂಸದರು ತಿಳಿಸಿದರು.

*******

ವಾಲ್ಮೀಕಿ ನಿಗಮದಲ್ಲಿ ನಡೆದಿದೆ ಎನ್ನಲಾದ 187 ಕೋಟಿ ಹಗರಣದ ಜವಾಬ್ದಾರಿ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಒತ್ತಾಯಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಜನ ವಿರೋಧಿ, ಸಂವೇದನಾರಹಿತ ಸರ್ಕಾರವಾಗಿದೆ. ಹಣಕಾಸು ಖಾತೆಯನ್ನು ಹೊಂದಿರುವ ಮುಖ್ಯಮಂತ್ರಿ ಅವರ ಗಮನಕ್ಕೆ ಬಾರದೆ ಹಗರಣ ನಡೆಯಲು ಸಾಧ್ಯವಿಲ್ಲ. ಹೀಗಾಗಿ ಮುಖ್ಯಮಂತ್ರಿ ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದರು.

ರಾಜ್ಯ ಸರ್ಕಾರ ನಿ ್ಕ್ರಿಯವಾಗಿದೆ. ಅಧಿಕಾರ ಲಾಲಸೆಯಿಂದ ಒಳ ಜಗಳ ಹೆಚ್ಚಾಗಿದೆ.  ಅದನ್ನು ಮರೆತು ಅಭಿವೃದ್ಧಿ ಕಡೆ ಗಮನ ಕೊಡಿ. ಸರ್ಕಾರದ ನಿರಾಸಕ್ತಿಯಿಂದ ಕೆಲ ಕಂಪನಿಗಳು ಹೊರ ರಾಜ್ಯಕ್ಕೆ ಹೋಗಿವೆ. ರಾಜ್ಯ ಸರ್ಕಾರ ಅವರನ್ನು ಕರೆದು ಮಾತಾಡಬೇಕು ಎಂದು ಪ್ರಲ್ಹಾದ ಜೋಶಿ ಆಗ್ರಹಿಸಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ ಇಂದು ಬೆಳಗ್ಗೆ 11 ಗಂಟೆಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ದೇಶ ಮತ್ತು ವಿದೇಶದ ಜನರೊಂದಿಗೆ ತಮ್ಮ ಮನದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್‌ನ 111 ನೇ ಸಂಚಿಕೆಯಾಗಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಇದು ಮೊದಲ ಸಂಚಿಕೆಯಾಗಿದೆ.

ಕಾರ್ಯಕ್ರಮವನ್ನು ಆಕಾಶವಾಣಿ ಮತ್ತು ದೂರದರ್ಶನ, ಎಐಆರ್ ನ್ಯೂಸ್ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನ ಸಂಪೂರ್ಣ ನೆಟ್‌ವರ್ಕ್‌ನಲ್ಲಿ ಪ್ರಸಾರವಾಗಲಿದೆ. ಇದು ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪಿಎಂಒ ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲೂ ಲೈವ್ ಸ್ಟ್ರೀಮ್ ಆಗುತ್ತದೆ.

ಹಿಂದಿ ಪ್ರಸಾರದ ನಂತರ ತಕ್ಷಣವೇ ಪ್ರಾದೇಶಿಕ ಭಾ ೆಗಳಲ್ಲಿ ಕಾರ್ಯಕ್ರಮ ಮರು ಪ್ರಸಾರವಾಗಲಿದೆ.

*******

ಐಸಿಸಿ ಟಿ-20 ವಿಶ್ವಕಪ್ ಕ್ರಿಕೆಟ್ ಟೂರ್ನಿಯ ಫೈನಲ್ ಪಂದ್ಯದಲ್ಲಿ, ನಿನ್ನೆ ಭಾರತ ರೋಚಕ ಗೆಲುವು ಸಾಧಿಸಿದೆ.

ವೆಸ್ಟ್‌ಇಂಡೀಸ್‌ನ ಬಾರ್ಬಡೋಸ್‌ನಲ್ಲಿ ನಡೆದ ದಕ್ಷಿಣ ಆಫ್ರಿಕಾ ಎದುರಿನ ಫೈನಲ್ ಪಂದ್ಯದಲ್ಲಿ ಭಾರತ 7 ರನ್‌ಗಳಿಂದ ರೋಚಕ ಗೆಲುವು ಸಾಧಿಸಿ, 2ನೇ ಬಾರಿ ಟಿ-20 ಚಾಂಪಿಯನ್ ಪಟ್ಟಕ್ಕೇರಿತು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ, ನಿಗದಿತ 20 ಓವರ್‌ಗಳಲ್ಲಿ, 7 ವಿಕೆಟ್ ಕಳೆದುಕೊಂಡು 176 ರನ್ ಗಳಿಸಿತು.. ಇದಕ್ಕೆ ಉತ್ತರವಾಗಿ ದಕ್ಷಿಣ ಆಫ್ರಿಕಾ ತಂಡ, 20 ಓವರ್‌ಗಳಲ್ಲಿ, 8 ವಿಕೆಟ್ ನ ಷ್ಟಕ್ಕೆ 169 ರನ್ ಗಳಿಸಿ, ಸೋಲನ್ನೊಪ್ಪಿಕೊಂಡಿತು.

ಭಾರತ ಕ್ರಿಕೆಟ್ ತಂಡದ ಗೆಲುವಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ ಧನಕರ್, ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಅಭಿನಂದಿಸಿದ್ದಾರೆ.

*******

ಪ್ರೌಢಶಾಲಾ ಹಂತದಲ್ಲೇ ವಿದ್ಯಾರ್ಥಿಗಳಿಗೆ ಸ್ವಾವಲಂಬಿ ಬದುಕಿಗಾಗಿ ವಿವಿಧ ಕೌಶಲ್ಯ ಕಲಿಸುವ ನಿಟ್ಟಿನಲ್ಲಿ ಕೋಲಾರ ಜಿಲ್ಲೆಯ ಐದು ಸರ್ಕಾರಿ ಪ್ರೌಢಶಾಲೆಗಳಲ್ಲಿ ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟಿನಡಿ ಆಟೋ ಮೊಬೈಲ್ ತರಬೇತಿ ನೀಡಲು ಕೇಂದ್ರ ಸರ್ಕಾರ ಮುಂದಾಗಿದೆ.

ಕೇಂದ್ರ ಸರ್ಕಾರದಿಂದ ರಾಜ್ಯದ 300 ಶಾಲೆಗಳಲ್ಲಿ ಈ ಕೋರ್ಸ್ ಆರಂಭಗೊಳ್ಳಲಿದೆ. ಕೋಲಾರ ಜಿಲ್ಲೆಯ ಐದು ಶಾಲೆಗಳು ಈ ಪಟ್ಟಿಯಲ್ಲಿ ಸೇರಿವೆ. ಇದಕ್ಕಾಗಿ ಅರಾಭಿಕೊತ್ತನೂರು, ಕ್ಯಾಲನೂರು, ವೇಮಗಲ್, ಮಾಸ್ತಿ, ಸುಂದರಪಾಳ್ಯ ಪ್ರೌಢಶಾಲೆಗಳಲ್ಲಿ ಅಗತ್ಯ ಪರಿಕರಗಳೊಂದಿಗೆ ಸುಸಜ್ಜಿತ ಪ್ರಾಯೋಗಿಕ ಕೋಣೆ ಸಿದ್ಧಗೊಳ್ಳಲಿವೆ. ಈ ಶೈಕ್ಷಣಿಕ ಸಾಲಿನಲ್ಲೇ ಕೌಶಲ್ಯ ತರಬೇತಿ ಆರಂಭಗೊಳ್ಳಲಿದೆ ಎಂದು ಎನ್‌ಎಸ್‌ಕ್ಯೂಎಫ್ ವೃತ್ತಿಶಿಕ್ಷಣ ಸಂಯೋಜಕಿ ದೀಪಿಕಾ ಮಾಹಿತಿ ನೀಡಿದ್ದಾರೆ.

*******

ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿದ್ದು ಸಾರ್ವಜನಿಕರು ತಮ್ಮ ಮನೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಸೀಮಾ.ಎಸ್ ಮನವಿ ಮಾಡಿದ್ದಾರೆ.

ಮನೆಯ ಸುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಸೊಳ್ಳೆ ಉತ್ಪತ್ತಿ ತಾಣಗಳನ್ನು ಗುರುತಿಸಿ ನಾಶ ಪಡಿಸಬೇಕು ಮತ್ತು ಜ್ವರ ಬಂದ ಸಂಧರ್ಭದಲ್ಲಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದ್ದಾರೆ.

ಇನ್ನು ಜನವರಿಯಿಂದ ಇಲ್ಲಿವರೆಗೆ ಜಿಲ್ಲೆಯಲ್ಲಿ 350 ಕ್ಕೂ ಹೆಚ್ಚು ಮಂದಿಗೆ ಡೆಂಗ್ಯೂ ಕಾಣಿಸಿಕೊಂಡಿದ್ದು ಜಿಲ್ಲೆಯ ಸಖರಾಯಪಟ್ಟಣದಲ್ಲಿ 9 ವ ್ಷದ ಬಾಲಕಿಯೊಬ್ಬಳು ಡೆಂಗ್ಯೂ ಕಾಯಿಲೆಯಿಂದ ನಿನ್ನೆ ಮೃತಪಟ್ಟಿದ್ದಾಳೆ.

*******

ಮೈಸೂರು ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿದ್ದು, ಡೆಂಗ್ಯೂ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಿನ್ನೆ ಡೆಂಗ್ಯೂ ನಿಯಂತ್ರಣ ಕುರಿತು ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದ ಅವರು, 3493 ಜನರಿಗೆ ಪರೀಕ್ಷೆ ನಡೆಸಿದ್ದು ಇದರಲ್ಲಿ 481 ಜನರಿಗೆ ಡೆಂಗ್ಯೂ ಇರುವುದು ಪತ್ತೆಯಾಗಿದೆ. ಫೆಬ್ರವರಿ ಮಾರ್ಚ್ ಏಪ್ರಿಲ್ ತಿಂಗಳಿನಲ್ಲಿ ಶೇಕಡಾ 18 ರಷ್ಟಿದ್ದ ಪ್ರಕರಣಗಳು ಈಗ ಶೇಕಡಾ 11 ಕ್ಕೆ ಇಳಿದಿವೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

*******

ದಕ್ಷಿಣ ಮಹಾರಾಷ್ಟ್ರ ಮತ್ತು ಮಧ್ಯ ಕೇರಳ ಕರಾವಳಿ ತೀರದಲ್ಲಿ ಸರಾಸರಿ ಸಮುದ್ರ ಮಟ್ಟದಲ್ಲಿ ಉಂಟಾಗಿರುವ ದುರ್ಬಲ ಮೇಲುಬ್ಬರದ ಪರಿಣಾಮ, ಮುಂದಿನ 5 ದಿನಗಳವರೆಗೆ ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕವಾಗಿ ಗುಡುಗು

ಸಿಡಿಲಿನಿಂದ ಕೂಡಿದ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಒಳನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ಇಲಾಖೆ ಮಾಹಿತಿ ನೀಡಿದೆ.

*******

ಕೊಡಗು ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ಮುಂದಿನ ಜುಲೈ ಮತ್ತು ಆಗಸ್ಟ್ ತಿಂಗಳಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಜಿಲ್ಲಾಧಿಕಾರಿ ವೆಂಕಟರಾಜಾ ತಿಳಿಸಿದ್ದಾರೆ.

ಮಡಿಕೇರಿಯಲ್ಲಿ ಪ್ರಾಕೃತಿಕ ವಿಕೋಪ ಸಂಬಂಧಿತ ಸಭೆಯಲ್ಲಿ ಮಾತನಾಡಿದ ಅವರು, ಆದ್ದರಿಂದ ಪ್ರಾಕೃತಿಕ ವಿಕೋಪ ನಿರ್ವಹಣೆಗೆ ಅಧಿಕಾರಿಗಳು ಹೆಚ್ಚಿನ ನಿಗಾ ವಹಿಸಬೇಕು ಎಂದರು.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ದೆಹಲಿಯಲ್ಲಿ ನಿನ್ನೆ ಪ್ರಧಾನ ಮಂತ್ರಿ ಅವರನ್ನು ಭೇಟಿಯಾಧ ಮುಖ್ಯಮಂತ್ರಿ ಸಿದ್ದರಾಮಯ್ಯ- ರಾಜ್ಯದ ಹಲವು ಅಭಿವೃದ್ಧಿ ಕಾರ್ಯಗಳ ಅನುಮೋದನೆಗೆ ಮನವಿ.

ವಾಲ್ಮೀಕಿ ನಿಗಮ ಹಗರಣ: ಹೊಣೆ ಹೊತ್ತು ಮುಖ್ಯಮಂತ್ರಿ ರಾಜೀನಾಮೆ ನೀಡಬೇಕು- ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಒತ್ತಾಯ.

ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ ಇಂದು ಬೆಳಗ್ಗೆ 11 ಕ್ಕೆ ಮನದ ಮಾತು ಹಂಚಿಕೊಳ್ಳಲಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ.

ಐಸಿಸಿ ಟಿ-20 ವಿಶ್ವಕಪ್ ಕ್ರಿಕೆಟ್: ಫೈನಲ್ ಪಂದ್ಯದಲ್ಲಿ, ಭಾರತಕ್ಕೆ ರೋಚಕ ಗೆಲುವು-ಗಣ್ಯರಿಂದ ಅಭಿನಂದನೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ

******